### ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 691 |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22-02-2023 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದ ರಾಷ್ಟ್ರೀಯ, ರಾಜ್ಯ ಹೆದ್ದಾರಿಗಳ ಮತ್ತು ಜಿಲ್ಲಾ ಮುಖ್ಯ ರಸ್ತೆಯ ಮಧ್ಯಭಾಗದಿಂದ ಕ್ರಮವಾಗಿ 40 ಮೀಟರ್ ಮತ್ತು 25 ಮೀಟರ್ ಪರಿಮಿತಿಯಲ್ಲಿ ಕಟ್ಟಡ ನಿರ್ಮಾಣಕ್ಕೆ ನಿಯಮ ಗಳನ್ನು ಪಾಲಿಸಲಾಗುತ್ತಿದೆಯೇ; ಪಾಲಿಸಲಾಗುತ್ತಿದ್ದಲ್ಲಿ, ಮೇಲ್ವಿಚಾರಣೆ ಮಾಡುವ ಸಕ್ಷಮ ಪ್ರಾಧಿಕಾರ ಯಾವುದು; (ವಿವರ ನೀಡುವದು) | ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಮಧ್ಯಭಾಗದಿಂದ ಕಟ್ಟಡ ರೇಖೆ ಪರಿಮಿತಿಯನ್ನು ಸರ್ಕಾರದ ಸುತ್ತೋಲೆ ಸಂಖ್ಯೆ:ಲೋಇ 466 ಸಿಆರ್‌ಎಂ 2022, ದಿನಾಂಕ:30-06-2022 ರಲ್ಲಿ ತಿಳಿಸಿರುವಂತೆ ನಿಗಧಿಗೊಳಿಸಲಾಗಿರುತ್ತದೆ. ಅದರಂತೆ ಕಟ್ಟಡ ನಿರ್ಮಾಣಕ್ಕೆ ನಿಯಮಗಳನ್ನು ಪಾಲಿಸಲಾಗುತ್ತಿದೆ.<br><br>ರಾಷ್ಟ್ರೀಯ ಹೆದ್ದಾರಿಗೆ ಸಂಬಂಧಿಸಿದಂತೆ ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿಗಳ ಮಂತ್ರಾಲಯದ ಪತ್ರ ಸಂ: NH.111/P/72/76 ದಿನಾಂಕ:13.01.1977 ರಲ್ಲಿ ಗ್ರಾಮಾಂತರ ಪ್ರದೇಶಗಳ ಮೂಲಕ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಗಳ ಮಧ್ಯ ಭಾಗದಿಂದ ಕನಿಷ್ಟ 40 ಮೀ ಹಾಗೂ ಪಟ್ಟಣ/ನಗರ ಪ್ರದೇಸಗಳ ಮೂಲಕ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಗಳ ಗಡಿರೇಖೆಯಿಂದ ಕನಿಷ್ಟ 3-6 ಮೀ ಅಂತರದಲ್ಲಿ ಯಾವುದೇ ಶಾಶ್ವತ ನಿರ್ಮಾಣ ಕಾರ್ಯ ಕೈಗೊಳ್ಳಬಾರದೆಂದು ಸೂಚಿಸಲಾಗಿರುತ್ತದೆ.<br><br>ಕೇಂದ್ರ ಭೂಸಾರಿಗೆ ಮಂತ್ರಾಲಯವು ದಿನಾಂಕ: ರಂದು ಹೊರಡಿಸಿರುವ ಸುತ್ತೋಲೆಯಲ್ಲಿ IRC. SP 15-1996 (Ribbon Development along Highways and its prevention) ನೀಡಿರುವ ನಿರ್ದೇಶನದನ್ವಯ ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡಲಾಗುತ್ತಿದೆ.<br><br>ಲೋಕೋಪಯೋಗಿ ಇಲಾಖೆಯ ಸಂಬಂಧಿಸಿದ ವಿಭಾಗಗಳ ಕಾರ್ಯಪಾಲಕ ಅಭಿಯಂತರರು ಮೇಲ್ವಿಚಾರಣೆ ಮಾಡುವ ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ. |
| ಆ) | ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಕಟ್ಟಡ ನಿಯಂತ್ರಣ ರೇಖೆಯನ್ನು ಮತ್ತು ರಸ್ತೆ ಭೂಗಡಿಯನ್ನು ಗುರುತಿಸುವವರು ಯಾರು; | ಲೋಕೋಪಯೋಗಿ ಇಲಾಖೆ ರಸ್ತೆಗಳ ಇಕ್ಕೆಲಗಳಲ್ಲಿ ಕಟ್ಟಡ ನಿಯಂತ್ರಣ ರೇಖೆಯನ್ನು ಮತ್ತು ರಸ್ತೆ ಭೂಗಡಿಯನ್ನು ಸಂಬಂಧಿಸಿದ ಲೋಕೋಪಯೋಗಿ ಇಲಾಖೆ ವಿಭಾಗದ ಕಾರ್ಯಪಾಲಕ ಅಭಿಯಂತರರು ಗುರುತಿಸುವ ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ. |

| ಕ್ರಮ ಸಂಖ್ಯೆ | ಪ್ರಶ್ನೆಗಳು | ಉತ್ತರಗಳು |
|---|---|---|
| | ಸುತ್ತೋಲೆ ಸಂಖ್ಯೆ:ಲೋಇ 466 ಸಿಆರ್‌ಎಂ 2022 (ಇ) ದಿನಾಂಕ: 30.06.2022 ರನ್ವಯ ಸರ್ಕಾರ ಕ್ರಮ ಜರುಗಿಸಿದೆಯೇ; ಕ್ರಮ ಜರುಗಿಸದಿರಲು ಕಾರಣಗಳೇನು; ಕ್ರಮಕ್ಕೆ ಸಮಯ ನಿಗದಿಪಡಿಸಲಾಗಿದೆಯೇ; (ವಿವರ ನೀಡುವುದು) | ಲೋಕೋಪಯೋಗಿ ಇಲಾಖೆ ವ್ಯಾಪ್ತಿಯ ರಾಜ್ಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಕಟ್ಟಡ ನಿಯಂತ್ರಣ ರೇಖೆ ಮತ್ತು ರಸ್ತೆ ಭೂಗಡಿ ಗುರುತಿಸಲು Land Plan Survey ಕೈಗೊಂಡು ರಾಜ್ಯ ಹೆದ್ದಾರಿ ರಸ್ತೆಗಳ ಭೂಗಡಿ ದಾಖಲೀಕರಣ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ:ಲೋಇ 466 ಸಿಆರ್‌ಎಂ 2022 (ಇ) ದಿನಾಂಕ:30.06.2022ರ ಸುತ್ತೋಲೆ ಹೊರಡಿಸುವ ಪೂರ್ವ ಮಾರ್ಗಸೂಚಿ ಮತ್ತು ನಿಯಮಗಳಲ್ಲಿ ಸ್ಪಷ್ಟತೆ ಇಲ್ಲದಿರುವುದರಿಂದ ಅವುಗಳಲ್ಲಿರುವ ಗೊಂದಲಗಳ ನಿವಾರಣೆಗಾಗಿ ವಿವರವಾದ ಮಾರ್ಗಸೂಚಿಗಳನ್ನೊಳಗೊಂಡಂತೆ ಸುತ್ತೋಲೆಯನ್ನು ಹೊರಡಿಸಿ ಸದರಿ ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಮುಂಬರುವ ದಿನಗಳಲ್ಲಿ ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿರುತ್ತದೆ. ಅದರನ್ವಯ ಕ್ರಮ ಜರುಗಿಸದಿರುವ ಯಾವುದೇ ಪ್ರಕರಣಗಳು ಇರುವುದಿಲ್ಲ. |
| ಇ) | ರಾಜ್ಯದಲ್ಲಿ ಕಟ್ಟಡ ನಿಷೇಧಿತ ಪರಿಮಿತಿಯಲ್ಲಿ ಇರುವ ಅಂಗಡಿ ವ್ಯವಹಾರಗಳನ್ನು ಪರಿಷ್ಕೃತ ರಸ್ತೆ ಅಂಚಿನ ನಿಯಮಗಳನ್ವಯ ತೆರವುಗೊಳಿಸಲಾಗುವುದೇ; ಈ ಕುರಿತು ಸರ್ಕಾರದ ನಿಲುವೇನು; (ವಿವರ ನೀಡುವದು) | ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿಗಳ ಕಟ್ಟಡ ನಿಷೇಧಿತ ಪರಿಮಿತಿಯಲ್ಲಿ (Building line) ಇರುವ ಹಳೆಯ ಕಟ್ಟಡಗಳನ್ನು ತೆರವುಗೊಳಿಸಿರುವುದಿಲ್ಲ. ರಸ್ತೆ ಅಗಲೀಕರಣ ಸಂದರ್ಭದಲ್ಲಿ ನಿಯಮಾನುಸಾರ ಭೂ-ಸ್ವಾಧೀನಪಡಿಸಿಕೊಳ್ಳಲಾಗುವುದು. ಭೂಸ್ವಾಧೀನವಾದ ಪ್ರದೇಶದಲ್ಲಿ ಕಟ್ಟಡಗಳಿದ್ದರೆ ಮಾತ್ರ ಅತಿಕ್ರಮಣವೆಂದು ಪರಿಗಣಿಸಿ ಅಂತಹ ಕಟ್ಟಡಗಳನ್ನು ತೆರವುಗೊಳಿಸಲಾಗುವುದು. ಹಾಗೂ ಹೊಸದಾಗಿ ಕಟ್ಟಡ ಪರವಾನಿಗೆ ನೀಡುವಾಗ ಕಡ್ಡಾಯವಾಗಿ ಕಟ್ಟಡ ನಿಯಂತ್ರಣ ರೇಖೆ ಪರಿಮಿತಿಯನ್ನು ಜಾರಿಗೆ ತರಲಾಗಿದೆ. |

ಕಡತ ಸಂಖ್ಯೆ: ಲೋಇ 52 ಸಿಎನ್‌ಹೆಚ್ 2023 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು